Akashvani: Bangalore
National Bulletin In Kannada
27.02.2026 : 7.35AM

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

27.02.2026 : 7.35AM

********

**ಮುಖ್ಯಾಂಶಗಳು :**

1. ವಿಕಸಿತ ಭಾರತಕ್ಕಾಗಿ ತಂತ್ರಜ್ಞಾನ ಸುಧಾರಣೆಗಳು ಮತ್ತು ಹಣಕಾಸು ಕುರಿತ ವೆಬಿನಾರ್ ಉದ್ದೇಶಿಸಿ ಇಂದು ಪ್ರಧಾನಿ ಭಾಷಣ
2. ಜೈಸಲ್ಮೇರ್‌ನಲ್ಲಿಂದು ವಾಯುಪಡೆಯ ವಾಯುಶಕ್ತಿ ಸಮರಾಭ್ಯಾಸ ವೀಕ್ಷಿಸಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು
3. ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ ಇಂದಿನಿಂದ ಭಾರತ ಭೇಟಿ; ಉಭಯ ರಾಷ್ಟ್ರಗಳ ಸಂಬಂಧ ಉತ್ತಮಗೊಳಿಸಲು ಅವಕಾಶ
4. ಭಾರತ - ಕೀನ್ಯಾ ಜಂಟಿ ರಕ್ಷಣಾ ಸಹಕಾರ ಸಮಿತಿ ೪ನೇ ಸಭೆ ಸಂಪನ್ನ
5. ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್; ಗುಂಪು-೧ರ ಪಂದ್ಯದಲ್ಲಿ ಜಿಂಬಾಬ್ವೆ ವಿರುದ್ಧ ಭಾರತಕ್ಕೆ ೭೨ ರನ್‌ಗಳ ಜಯ

********

ಪ್ರಧಾನಿ ನರೇಂದ್ರ ಮೋದಿ ಅವರಿಂದು ವಿಕಸಿತ ಭಾರತಕ್ಕಾಗಿ ತಂತ್ರಜ್ಞಾನ ಸುಧಾರಣೆಗಳು ಮತ್ತು ಹಣಕಾಸು ಎಂಬ ವಿಷಯದ ಕುರಿತು ಆಯೋಜಿಸಲಾಗಿರುವ ೨೦೨೬-೨೭ರ ಕೇಂದ್ರ ಆಯವ್ಯಯದ ಪ್ರಮುಖ ವಿಷಯಗಳ ಕುರಿತ ವೆಬಿನಾರ್‌ಅನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಈ ವೆಬಿನಾರ್‌ನಲ್ಲಿ ಸಾರ್ವಜನಿಕ ಬಂಡವಾಳ ವೆಚ್ಚ, ಮೂಲಸೌಕರ್ಯ, ಬ್ಯಾಂಕಿಂಗ್ ವಲಯದ ಸುಧಾರಣೆಗಳು, ಹಣಕಾಸು ವಲಯದ ರಚನೆ, ಬಂಡವಾಳ ಮಾರುಕಟ್ಟೆಗಳ ಬಲವರ್ಧನೆ ಮತ್ತು ತೆರಿಗೆ ಸುಧಾರಣೆಗಳ ಮೂಲಕ ಜೀವನ ಸುಲಭಗೊಳಿಸುವ ಕುರಿತು ಚರ್ಚೆಗಳು ನಡೆಯಲಿವೆ. ಆಯವ್ಯಯದ ಕುರಿತು ಹಮ್ಮಿಕೊಂಡಿರುವ ಸರಣಿ ವೆಬಿನಾರ್‌ಗಳಲ್ಲಿ ಇದು ಮೊದಲನೆಯದಾಗಿದೆ. ಇವುಗಳಲ್ಲಿ ಉದ್ಯಮ ನಿಯಂತ್ರಕರು, ಹಣಕಾಸು ಸಂಸ್ಥೆಗಳು, ಮಾರುಕಟ್ಟೆ ಪಾಲುದಾರರು, ಸರ್ಕಾರಿ ಅಧಿಕಾರಿಗಳು, ಶೈಕ್ಷಣಿಕ ತಜ್ಞರು ಪಾಲ್ಗೊಳ್ಳಲಿದ್ದಾರೆ.

********

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದು ರಾಜಸ್ತಾನದ ಜೈಸಲ್ಮೇರ್‌ನಲ್ಲಿ ನಡೆಯಲಿರುವ ಭಾರತೀಯ ವಾಯುಪಡೆಯ ವಾಯುಶಕ್ತಿ ಸಮರಾಭ್ಯಾಸವನ್ನು ವೀಕ್ಷಿಸಲಿದ್ದಾರೆ. ಎರಡು ದಿನಗಳ ಭೇಟಿಗಾಗಿ ರಾಷ್ಟ್ರಪತಿಗಳು ನಿನ್ನೆ ಸಂಜೆ ಜೈಸಲ್ಮೇರ್‌ಗೆ ಆಗಮಿಸಿದ್ದಾರೆ. ಸಮರಾಭ್ಯಾಸಕ್ಕೂ ಮುನ್ನ ರಾಷ್ಟ್ರಪತಿ, ಸ್ವದೇಶಿ ನಿರ್ಮಿತ ಲಘು ಯುದ್ಧ ಹೆಲಿಕಾಪ್ಟರ್ ಪ್ರಚಂಡ್‌ನಲ್ಲಿ ಹಾರಾಟ ನಡೆಸಲಿದ್ದಾರೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಪ್ರಚಂಡ್, ಭಾರತದ ಮೊದಲ ಸ್ವದೇಶಿ ವಿನ್ಯಾಸದ ಯುದ್ಧ ಹೆಲಿಕಾಪ್ಟರ್ ಆಗಿದ್ದು, ಇದನ್ನು ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ ಎಚ್‌ಎಎಲ್ ಅಭಿವೃದ್ಧಿಪಡಿಸಿದೆ. ಈ ಕಾರ್ಯಕ್ರಮದ ಬಳಿಕ ರಾಷ್ಟ್ರಪತಿ, ಭಾರತ - ಪಾಕಿಸ್ತಾನ ಗಡಿಯ ಸಮೀಪವಿರುವ ಪೋಖ್ರಾನ್ ಫೈರಿಂಗ್ ರೇಂಜ್‌ನಲ್ಲಿ ನಡೆಯಲಿರುವ ವಾಯುಪಡೆಯ ಬೃಹತ್ ಪ್ರದರ್ಶನದಲ್ಲಿ ಪಾಲ್ಗೊಳ್ಳಲಿದ್ದಾರೆ. ಈ ಕಾರ್ಯಕ್ರಮದಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಮುಖ್ಯಮಂತ್ರಿ ಭಜನ್ ಲಾಲ್ ಶರ್ಮಾ ಪಾಲ್ಗೊಳ್ಳುವ ನಿರೀಕ್ಷೆ ಇದೆ.

********

ನವದೆಹಲಿಯಲ್ಲಿಂದು ಭಾರತೀಯ ಸಮೂಹ ಸಂವಹನ ಸಂಸ್ಥೆ - ಐಐಎಂಸಿಯ ೫೭ನೇ ಘಟಿಕೋತ್ಸವ ಸಮಾರಂಭ ನಡೆಯಲಿದೆ. ಈ ಸಮಾರಂಭದಲ್ಲಿ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಭಾಗವಹಿಸಲಿದ್ದಾರೆ. ಐಐಎಂಸಿಯ ಕುಲಪತಿಯೂ ಆಗಿರುವ ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಸಮಾರಂಭದಲ್ಲಿ ಒಟ್ಟು ೩೫ ಪದಕಗಳನ್ನು ವಿದ್ಯಾರ್ಥಿಗಳಿಗೆ ವಿತರಿಸಲಾಗುವುದು. ಇದೇ ಸಂದರ್ಭದಲ್ಲಿ ಉಪರಾಷ್ಟ್ರಪತಿ,

ಹೊಸ ಶೈಕ್ಷಣಿಕ ಕಟ್ಟಡ ಮತ್ತು ವಸತಿ ಕಟ್ಟಡಕ್ಕೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಇದರ ಜೊತೆಗೆ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್, ಇನ್‌ಕ್ಯುಬೇಶನ್ ಸೆಂಟರ್‌ನಲ್ಲಿ ಕ್ರಿಯೇಟರ್ಸ್ ಲಾಂಚ್‌ಅನ್ನು ಉದ್ಘಾಟಿಸಲಿದ್ದಾರೆ.

********

ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ ಇಂದಿನಿಂದ ಮಾರ್ಚ್ ೨ರ ವರೆಗೆ ಭಾರತಕ್ಕೆ ಅಧಿಕೃತ ಭೇಟಿ ನೀಡಲಿದ್ದಾರೆ. ಇದು ಅವರ ಮೊದಲ ಭಾರತ ಭೇಟಿಯಾಗಿದೆ. ಇಂದು ಅವರು ಮುಂಬೈಗೆ ಆಗಮಿಸಲಿದ್ದು, ಮುಂದಿನ ಎರಡು ದಿನಗಳ ಕಾಲ ಭಾರತೀಯ ಮತ್ತು ಕೆನಡಾ ಕಂಪನಿಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಉದ್ಯಮ ತಜ್ಞರು ಮತ್ತು ಹೂಡಿಕೆದಾರರೊಂದಿಗೆ ಸಂವಾದ ನಡೆಸಲಿದ್ದಾರೆ. ಮಾರ್ಚ್ ೨ ರಂದು ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ, ಹೈದರಾಬಾದ್ ಭವನದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ನಿಯೋಗಮಟ್ಟದ ಮಾತುಕತೆ ನಡೆಸಲಿದ್ದಾರೆ. ವ್ಯಾಪಾರ, ಹೂಡಿಕೆ, ಇಂಧನ, ಕೃಷಿ, ಶಿಕ್ಷಣ ಮತ್ತು ಸಂಶೋಧನೆ ಸೇರಿದಂತೆ ದ್ವಿಪಕ್ಷೀಯ ಕಾರ್ಯತಂತ್ರದ ಪಾಲುದಾರಿಕೆಯ ಪ್ರಗತಿಯನ್ನು ಉಭಯ ನಾಯಕರು ಪರಿಶೀಲಿಸಲಿದ್ದಾರೆ.

********

ಭಾರತ - ಕೀನ್ಯಾ ನಡುವಿನ ಜಂಟಿ ರಕ್ಷಣಾ ಸಹಕಾರ ಸಮಿತಿ - ಜೆಡಿಸಿಸಿಯ ನಾಲ್ಕನೇ ಸಭೆ ನಿನ್ನೆ ಸಂಪನ್ನಗೊಂಡಿದೆ. ಸಭೆಯಲ್ಲಿ ರಕ್ಷಣಾ ಸಂಶೋಧನೆ, ಅಭಿವೃದ್ಧಿ ಮತ್ತು ಉತ್ಪಾದನೆಯಲ್ಲಿ ಸಹಭಾಗಿತ್ವವನ್ನು ಉತ್ತೇಜಿಸುವುದರ ಮೇಲೆ ಚರ್ಚೆಗಳು ಕೇಂದ್ರೀಕರಿಸಿದ್ದವು. ಉಭಯ ದೇಶಗಳ ನೌಕಾಪಡೆಗಳ ನಡುವೆ, ವ್ಯವಸ್ಥಿತ ಮತ್ತು ರಚನಾತ್ಮಕ ಸಂವಾದವನ್ನು ಪ್ರಾರಂಭಿಸಲು ಹಾಗೂ ಸೇನಾ ಚಟುವಟಿಕೆಗಳ ವ್ಯಾಪ್ತಿಯನ್ನು ವಿಸ್ತರಿಸಲು ಸಮ್ಮತಿಸಲಾಯಿತು. ಹಿಂದಿನ ಸಭೆಯ ನಂತರ ಸಾಧಿಸಲಾದ ಪ್ರಗತಿಯ ಬಗ್ಗೆ ಉಭಯ ನಿಯೋಗಗಳು ತೃಪ್ತಿ ವ್ಯಕ್ತಪಡಿಸಿದರಲ್ಲದೆ, ರಕ್ಷಣಾ ಸಹಕಾರವನ್ನು ಮತ್ತಷ್ಟು ಬಲಪಡಿಸಲು ಮುಂದಿನ ಐದು ವರ್ಷಗಳ ಕಾಲಾವಧಿಗೆ ಸಮಗ್ರ ಕಾರ್ಯಸೂಚಿ ರೂಪಿಸಲು ನಿರ್ಧರಿಸಲಾಯಿತು. ಸೈಬರ್ ಭದ್ರತೆ, ಗಡಿ ನಿರ್ವಹಣೆ ಮತ್ತು ಮಿಲಿಟರಿ ವೈದ್ಯಕೀಯ ಸೇವೆಗಳಂತಹ ಸುಧಾರಿತ ಕ್ಷೇತ್ರಗಳಲ್ಲಿ ಸಾಮರ್ಥ್ಯವೃದ್ಧಿ ಹಾಗೂ ಜ್ಞಾನ ವಿನಿಮಯದ ಬಗ್ಗೆ ಚರ್ಚಿಸಲಾಯಿತು. ಸಭೆಯಲ್ಲಿ ಭಾರತದ ಪರವಾಗಿ ರಕ್ಷಣಾ ಸಚಿವಾಲಯದ ಜಂಟಿ ಕಾರ್ಯದರ್ಶಿ ಅಮಿತಾಬ್ ಪ್ರಸಾದ್ ಹಾಗೂ ಕೀನ್ಯಾ ಪರವಾಗಿ ಸಹಾಯಕ ರಕ್ಷಣಾ ಪಡೆಗಳ ಮುಖ್ಯಸ್ಥ ಮೇಜರ್ ಜನರಲ್ ಫ್ರೆಡ್ರಿಕ್ ಎಲ್ ಲೂರಿಯಾ ಅವರು ಸಹ ಅಧ್ಯಕ್ಷತೆ ವಹಿಸಿದ್ದರು.

********

ಬ್ರಿಟನ್ ದೊರೆ ಚಾರ್ಲ್ಸ್ IIIರ ಹುಟ್ಟುಹಬ್ಬದ ಅಂಗವಾಗಿ ಬೆಂಗಳೂರಿನಲ್ಲಿ ನಡೆದ ವಿಶೇಷ ಸಮಾರಂಭದಲ್ಲಿ ಸಮಾರಂಭದಲ್ಲಿ ನಿನ್ನೆ ಕರ್ನಾಟಕ ಸರ್ಕಾರದ ಸಚಿವರಾದ ಎಂ.ಬಿ. ಪಾಟೀಲ್ ಮತ್ತು ಎಂ.ಸಿ. ಸುಧಾಕರ್ ಅವರು ಭಾಗವಹಿಸಿದ್ದರು. ಈ ವೇಳೆ ಅವರು, ಕರ್ನಾಟಕ ಮತ್ತು ಬ್ರಿಟನ್ ನಡುವಿನ ಬಾಂಧವ್ಯಗಳನ್ನು ಶ್ಲಾಘಿಸಿದರು. ಬ್ರಿಟಿಷ್ ಡೆಪ್ಯೂಟಿ ಹೈಕಮಿಷನರ್ ಚಂದ್ರು ಅಯ್ಯರ್ ಅವರ ಕಚೇರಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸರ್ಕಾರಿ ಅಧಿಕಾರಿಗಳು, ಉದ್ಯಮ ಪ್ರತಿನಿಧಿಗಳು ಮತ್ತು ರಾಜತಾಂತ್ರಿಕ ಸಮುದಾಯದ ಸದಸ್ಯರು ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವ ಎಂ.ಬಿ. ಪಾಟೀಲ್, ಕರ್ನಾಟಕ ಮತ್ತು ಬ್ರಿಟನ್ ವಿಶೇಷವಾಗಿ ಕೈಗಾರಿಕೆ ಮತ್ತು ಹೂಡಿಕೆಯಲ್ಲಿ ದೀರ್ಘಾವಧಿಯ ಇತಿಹಾಸವನ್ನು ಹೊಂದಿವೆ ಎಂದು ಹೇಳಿದರು. ಲಂಡನ್‌ಗೆ ಇತ್ತೀಚೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಅವರು ಅಲ್ಲಿನ ಕೈಗಾರಿಕಾ ನಾಯಕರನ್ನು ಭೇಟಿಯಾಗಿ ಕರ್ನಾಟಕದಲ್ಲಿ ಹೂಡಿಕೆ ಮಾಡಲು ಅವರನ್ನು ಪ್ರೋತ್ಸಾಹಿಸಿರುವುದಾಗಿ ಹೇಳಿದರು. ಯುವಕರಿಗೆ ಅವಕಾಶಗಳನ್ನು ಸೃಷ್ಟಿಸುವ ಗುರಿಯನ್ನು ಹೊಂದಿರುವ ದಾಬಸ್ ಪೇಟೆ ಬಳಿಯ ಪ್ರಸ್ತಾವಿತ ಜ್ಞಾನ, ಯೋಗಕ್ಷೇಮ ಮತ್ತು ನಾವೀನ್ಯತೆ ನಗರ ಯೋಜನೆಯಲ್ಲಿ ಬ್ರಿಟಿಷ್ ಕಂಪನಿಗಳು ಮತ್ತು ವಿಶ್ವವಿದ್ಯಾಲಯಗಳು ಭಾಗವಹಿಸುವ ನಿರೀಕ್ಷೆಯಿದೆ ಎಂದು ಹೇಳಿದರು.

********

ರಾಷ್ಟ್ರೀಯತಾವಾದಿ ಕಾಂಗ್ರೆಸ್ ಪಕ್ಷ - ಎನ್‌ಸಿಪಿ ಮಹಾರಾಷ್ಟ್ರದ ಉಪಮುಖ್ಯಮಂತ್ರಿ ಸುನೇತ್ರ ಪವಾರ್ ಅವರನ್ನು ಪಕ್ಷದ ರಾಷ್ಟ್ರೀಯ ಅಧ್ಯಕ್ಷೆಯಾಗಿ ಸರ್ವಾನುಮತದಿಂದ ಆಯ್ಕೆ ಮಾಡಿದೆ. ನಿನ್ನೆ ಮುಂಬೈನ ವರ್ಲಿಯಲ್ಲಿ ನಡೆದ ಎನ್‌ಸಿಪಿಯ ರಾಷ್ಟ್ರೀಯ ಸಮಾವೇಶದಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ರಾಜ್ಯಸಭಾ ಚುನಾವಣೆಗೆ ಅಜಿತ್ ಪವಾರ್ ಪುತ್ರ ಪಾರ್ಥ್ ಪವಾರ್ ಅವರನ್ನು ಪಕ್ಷವು ತನ್ನ ಅಭ್ಯರ್ಥಿಯನ್ನಾಗಿ ಘೋಷಿಸಿದೆ. ಹೊಸದಾಗಿ ಆಯ್ಕೆಯಾದ ಎನ್‌ಸಿಪಿ ಅಧ್ಯಕ್ಷೆ ಸುನೇತ್ರ

ಪವಾರ್, ತಮ್ಮ ನಾಯಕತ್ವದಲ್ಲಿ ನಂಬಿಕೆ ಇಟ್ಟಿದ್ದಕ್ಕಾಗಿ ಪಕ್ಷದ ಹಿರಿಯ ನಾಯಕರು, ಪದಾಧಿಕಾರಿಗಳು ಮತ್ತು ಕಾರ್ಯಕರ್ತರಿಗೆ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಕೃತಜ್ಞತೆ ಸಲ್ಲಿಸಿದ್ದಾರೆ.

********

ಭಾರತದಿಂದ ವ್ಯಾಪಾರ ಸಂಬಂಧಗಳು, ಹೆಚ್ಚಿನ ಹೂಡಿಕೆ ಮತ್ತು ಪ್ರವಾಸಿಗರ ಆಗಮನದ ಹೆಚ್ಚಳವನ್ನು ಶ್ರೀಲಂಕಾ ಪ್ರಧಾನಿ ಹರಿಣಿ ಅಮರಸೂರಿಯಾ ಸ್ವಾಗತಿಸಿದ್ದಾರೆ. ಭಾರತದ ೭೭ ನೇ ಗಣರಾಜ್ಯೋತ್ಸವ ಮತ್ತು ಶ್ರೀಲಂಕಾದ ೭೮ ನೇ ಸ್ವಾತಂತ್ರ್ಯ ದಿನಾಚರಣೆಯ ಸ್ಮರಣಾರ್ಥ ಆಯೋಜಿಸಲಾಗಿದ್ದ ಔತಣಕೂಟವನ್ನುದ್ದೇಶಿಸಿ ಮಾತನಾಡಿದ ಅವರು, ಪ್ರವಾಸೋದ್ಯಮದ ಮೂಲಕ ಹೆಚ್ಚಿನ ಜನರಿಂದ ಜನರಿಗೆ ವಿನಿಮಯವನ್ನು ಎದುರು ನೋಡುತ್ತಿದೆ ಎಂದು ಹೇಳಿದ್ದಾರೆ. ಭಾರತವನ್ನು ಶ್ರೀಲಂಕಾದ "ನಿಕಟ ಪಾಲುದಾರ" ಎಂದು ಬಣ್ಣಿಸಿದ ಅವರು, ಸಂಕಷ್ಟದ ಸಮಯದಲ್ಲಿ ಭಾರತ ನೀಡಿರುವ ಬೆಂಬಲವನ್ನು ಸ್ವಾಗತಿಸಿದರು. ಆರ್ಥಿಕ, ಸಾಂಸ್ಕೃತಿಕ ಮತ್ತು ಸಾಮಾಜಿಕ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರವನ್ನು ಮುಂದುವರಿಸಲು ತಮ್ಮ ಸರ್ಕಾರ ಬದ್ಧವಾಗಿದೆ ಎಂದು ಅವರು ಹೇಳಿದರು.

********

ಮಾರ್ಚ್ ೫ ರಂದು ನಡೆಯಲಿರುವ ನೇಪಾಳದ ಸಾರ್ವತ್ರಿಕ ಚುಣಾವಣೆಗಳಿಗೆ ಭಾರತ ಅತ್ಯಂತ ಉದಾರ ಮತ್ತು ಸಹಕಾರಯುತ ಪಾಲುದಾರನಾಗಿ ಬೆಂಬಲ ನೀಡಿದೆ ಎಂದು ನೇಪಾಳ ಅರಣ್ಯ ಮತ್ತು ಪರಿಸರ ಸಚಿವ ಮಾಧವ್ ಪ್ರಸಾದ್ ಚೌಲ್‌ಗೇನ್ ತಿಳಿಸಿದ್ದಾರೆ. ಈ ಕುರಿತು ಮಾತನಾಡಿರುವ ಅವರು ಭಾರತ, ನೆರೆಯ ರಾಷ್ಟ್ರವಾಗಿ ಅತ್ಯಂತ ನಿಕಟ ಪಾಲುದಾರಿಕೆಯನ್ನು ಹೊಂದಿದೆ, ಚುನಾವಣಾ ಪ್ರಕ್ರಿಯೆಯು ಸುಗಮವಾಗಿ ನಡೆಯಲು ಅಗತ್ಯವಿರುವ ಎಲ್ಲಾ ಸಂಪನ್ಮೂಲಗಳನ್ನು ಒದಗಿಸುವಲ್ಲಿ ಹಾಗೂ ಸಕಾಲದಲ್ಲಿ ಸಿದ್ಧವಾಗುವಂತೆ ನೋಡಿಕೊಳ್ಳುವಲ್ಲಿ ಭಾರತ ನೆರವಾಗಿದೆ ಎಂದು ಅವರು ಹೇಳಿದ್ದಾರೆ.

********

ಚೆನ್ನೈನ ಎಂಎ ಚಿದಂಬರಂ ಕ್ರೀಡಾಂಗಣದಲ್ಲಿ ನಡೆದ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಸೂಪರ್ ೮ರ ಹಂತದ ಗುಂಪು-೧ರ ಪಂದ್ಯದಲ್ಲಿ ಜಿಂಬಾಬ್ವೆ ತಂಡವನ್ನು ಭಾರತ ೭೨ ರನ್‌ಗಳಿಂದ ಮಣಿಸಿದೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಭಾರತ, ನಿಗದಿತ ೨೦ ಓವರ್‌ಗಳಲ್ಲಿ ೪ ವಿಕಟ್ ನಷ್ಟಕ್ಕೆ ೨೫೬ ರನ್ ಗಳಿಸಿತು. ಪ್ರತಿಯಾಗಿ ಜಿಂಬಾಬ್ವೆ ನಿಗದಿತ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೮೪ ರನ್ ಗಳಿಸಲಷ್ಟೇ ಶಕ್ತವಾಯಿತು. ಈ ಗೆಲುವಿನ ಬೆನ್ನಲ್ಲೇ ಸೆಮಿಫೈನಲ್ ಲೆಕ್ಕಾಚಾರದಲ್ಲಿ ದಕ್ಷಿಣಾ ಆಫ್ರಿಕಾ ಸೆಮಿಫೈನಲ್‌ನಲ್ಲಿ ತನ್ನ ಸ್ಥಾನವನ್ನು ಖಚಿತಪಡಿಸಿಕೊಂಡಿದ್ದು, ಜಿಂಬಾಬ್ವೆ ಸೆಮಿಫೈನಲ್ ಸ್ಪರ್ಧೆಯಿಂದ ಹೊರಬಿದ್ದಿದೆ. ಭಾರತಕ್ಕೆ ಮಾರ್ಚ್ ೧ರಂದು ನಡೆಯಲಿರುವ ವೆಸ್ಟ್ ಇಂಡೀಸ್ ವಿರುದ್ಧದ ಪಂದ್ಯ ಸೆಮಿಫೈನಲ್ ಪ್ರವೇಶಿಸಲು ನಿರ್ಣಾಯಕವಾಗಿದೆ.

****END****